**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 13–02–2019**

ಪತ್ರಿಕಾ ಪ್ರಕಟಣೆ

# ಅರೆಕಾಲಿಕ ವರದಿಗಾರರ ನೇಮಕಾತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ಆಕಾಶವಾಣಿಯ ಬೆಂಗಳೂರು ಕೇಂದ್ರದ ಸುದ್ದಿ ವಿಭಾಗಕ್ಕೆ ಹಾವೇರಿ, ಶಿವಮೊಗ್ಗ, ಹಾಸನ, ಚಿತ್ರದುರ್ಗ, ಉತ್ತರ ಕನ್ನಡ, ಬಾಗಲಕೋಟೆ, ಚಿಕ್ಕಮಗಳೂರು, ತುಮಕೂರು, ಉಡುಪಿ, ಯಾದಗಿರಿ, ಕಲಬುರಗಿ ಮತ್ತು ಹುಬ್ಬಳ್ಳಿ – ಧಾರವಾಡ ಜಿಲ್ಲೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುವ ಅರೆಕಾಲಿಕ ವರದಿಗಾರರು ಬೇಕಾಗಿದ್ದಾರೆ.

ಪಿಜಿ ಡಿಪ್ಲೊಮಾ/ಪತ್ರಿಕೋದ್ಯಮದಲ್ಲಿ ಪದವಿ/ಸಮೂಹ ಮಾಧ್ಯಮ ಅಥವಾ ಪತ್ರಕರ್ತರರಾಗಿ ಕನಿಷ್ಠ ಎರಡು ವರ್ಷಗಳ ಅನುಭವ ಅಗತ್ಯ. ವಯೋಮಿತಿ 24 ರಿಂದ 45 ವರ್ಷಗಳು, ಸರ್ಕಾರಿ ಉದ್ಯೋಗಿಗಳು, ಸಾರ್ವಜನಿಕ ಸಂಸ್ಥೆಗಳ ಸಿಬ್ಬಂದಿ, ರಾಜಕೀಯ ಪಕ್ಷಗಳ ಸದಸ್ಯರು ಈ ಹುದ್ದೆಗೆ ಅರ್ಹರಾಗುವುದಿಲ್ಲ.

ಆಸಕ್ತರು ಸ್ವವಿವರಗಳನ್ನು ಒಳಗೊಂಡ ಅರ್ಜಿಯನ್ನು 25–02–2019 ರ ಒಳಗೆ ತಲುಪುವಂತೆ, ಉಪ ಮಹಾನಿರ್ದೇಶಕರು (ಇ), ಅಕಾಶವಾಣಿ, ರಾಜಭವನ ರಸ್ತೆ, ಬೆಂಗಳೂರು – 560 001 ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ಆಕಾಶವಾಣಿಯ ವೆಬ್‌ಸೈಟ್ www.airbengaluru.com ಅನ್ನು ಸಂಪರ್ಕಿಸಬಹುದಾಗಿದೆ ಎಂದು ಭಾರತೀಯ ಪ್ರಸಾರ ನಿಗಮ, ಆಕಾಶವಾಣಿ ಪ್ರಕಟಣೆ ತಿಳಿಸಿದೆ.

# ವಿಧಾನ ಪರಿಷತ್ ಕಲಾಪಗಳು

ಬೆಂಗಳೂರು, ಫೆಬ್ರವರಿ 13 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರದ ಸಮಿತಿಯ 2018-19ನೇ ಸಾಲಿನ 34ನೇ ವರದಿಯನ್ನು ಮತ್ತು ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 2018-19ನೇ ಸಾಲಿನ ಮೊದಲನೇ ವರದಿಯನ್ನು ವಿಧಾನ ಪರಿಷತ್‌ನಲ್ಲಿ ಇಂದು ಬೆಳಿಗ್ಗೆ ಮಂಡಿಸಲಾಯಿತು.

ವಿಧಾನ ಪರಿಷತ್ ಸದಸ್ಯರಾದ ಎನ್.ಅಪ್ಪಾಜಿಗೌಡರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವ ಆರ್.ವಿ.ದೇಶಪಾಂಡೆ, ರಾಜ್ಯದಲ್ಲಿ ತತ್ಕಾಲ್ ಪೋಡಿಗಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ 84,173 ಅವುಗಳನ್ನು ಜೇಷ್ಠತೆಯ ಆಧಾರದ ಮೇಲೆ ಅಳತೆಮಾಡಿ, ಅಳತೆಯಾದ ನಂತರ ಭೂಮಾಪಕರು ಆನ್‌ಲೈನ್ನಲ್ಲೇ ಕಡತಗಳನ್ನು ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಿದ್ದು, ಕಡತಗಳ ಪರಿಶೀಲನೆ ಮತ್ತು ಅನುಮೋದನೆ ಸಹ ಆನ್‌ಲೈನ್‌ನಲ್ಲೇ ನಿರ್ವಹಿಸಲಾಗುತ್ತಿದೆ. ಪ್ರಸ್ತುತ ಭೂಮಾಪಕರಿಗೆ ಮಾಹೆಯಾನ 30 ಅಳತೆ ಕಾರ್ಯ ಮಾಡಲು ನಿಗದಿಪಡಿಸಲಾಗಿದೆ. ಜೊತೆಗೆ ಸದರಿ ಕಾರ್ಯಕ್ಕೆ ಅವಶ್ಯಕತೆ ಕಂಡುಬಂದಲ್ಲಿ ಪರವಾನಗಿ ಭೂಮಾಪಕರನ್ನು ನಿಯೋಜನೆ ಮಾಡಿಕೊಳ್ಳಲು ಆಯಾ ಜಿಲ್ಲಾ ಭೂದಾಖಲೆಗಳ ಉಪ ನಿರ್ದೇಶಕರಿಗೆ ಸೂಚಿಸಲಾಗಿದೆ. ಕಳೆದ 3 ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಸಲ್ಲಿಸಿರುವ ಅರ್ಜಿ ಸಂಖ್ಯೆ 14,052. ವಿಲೇವಾರಿಯಾದ ಅರ್ಜಿ ಸಂಖ್ಯೆ 14,022.

ಡಾ. ತೇಜಸ್ವಿನಿಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಡಾ. ಜಯಮಾಲಾ, 2017ರಲ್ಲಿ ಲಿಂಗಾನುಪಾತ 1 ಸಾವಿರ ಗಂಡು ಸಂತತಿಗೆ ಎದುರಾಗಿ 927 ಹೆಣ್ಣು ಸಂತತಿಯಾಗಿದ್ದು, ಲಿಂಗಾನುಪಾತ ನಮ್ಮ ರಾಜ್ಯದಲ್ಲಿ ಹೆಚ್ಚಳವಾಗಿರುವುದು ಕಂಡು ಬಂದಿರುತ್ತದೆ. ಹೆಣ್ಣು ಮಗುವಿನ ರಕ್ಷಣೆ ಮತ್ತು ಬದುಕುವ ಹಕ್ಕನ್ನು ಉಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಭಾಗ್ಯಲಕ್ಷ್ಮಿ ಯೋಜನೆ, ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆ ಮತ್ತು ಕರ್ನಾಟಕ ರಾಜ್ಯ ಹೆಣ್ಣು ಮಕ್ಕಳ ನೀತಿ 2018 ನ್ನು ಜಾರಿಗೆ ತರಲಾಗಿದೆ. ಹೆಣ್ಣು ಭ್ರೂಣ ಹತ್ಯೆ ತಡೆಯಲು ಸಾಧ್ಯವಿರುವ ಎಲ್ಲಾ ರೀತಿಯ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಲಾಗುತ್ತಿದೆ. ಹೆಣ್ಣು ಭ್ರೂಣ ಹತ್ಯೆ ಅಥವಾ ಅನಧಿಕೃತ ಸೆಂಟರ್‌ಗಳ ವಿರುದ್ಧ ಸಾರ್ವಜನಿಕರು ದೂರು ನೀಡಲು 104 ದೂರವಾಣಿ ಸಂಖ್ಯೆ ಮುಖಾಂತರ ಅವಕಾಶ ನೀಡಲಾಗುತ್ತದೆ.

ಕೆ.ಟಿ. ಶ್ರೀಕಂಠೇಗೌಡರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಯುವಜನ ಮತ್ತು ಕ್ರೀಡಾ ಸಚಿವರು ಮಂಡ್ಯ ನಗರದಲ್ಲಿ ನಿರ್ಮಾಣಗೊಂಡಿರುವ ಒಳಾಂಗಣದ ಕ್ರೀಡಾಂಗಣದ ಕಾಮಗಾರಿಯ ಪರಿಷ್ಕೃತ

ಅಂದಾಜು ವೆಚ್ಚ ರೂ 319.90 ಲಕ್ಷ ಆಗಿದ್ದು, ಮರದ ನೆಲಹಾಸು ಕಾಮಗಾರಿ ಹೊರತುಪಡಿಸಿ ಉಳಿದ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. ಸದರಿ ಕಾಮಗಾರಿ ಮುಗಿದ ನಂತರ ಕ್ರೀಡಾಂಗವನ್ನು ಇಲಾಖೆಗೆ ಹಸ್ತಾಂತರ ಮಾಡಿಕೊಂಡು ಶೀಘ್ರದಲ್ಲೇ ಸಾರ್ವಜನಿಕರ ಬಳಕೆಗೆ ನೀಡಲಾಗುವುದು ಎಂದರು.

ಪಿ.ಆರ್. ರಮೇಶ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮುಜರಾಯಿ ಸಚಿವ ಪರಮೇಶ್ವರ ನಾಯಕ್, ಕರ್ನಾಟಕದಿಂದ ತಿರುಮಲಕ್ಕೆ ಬರುವ ಭಕ್ತಾಧಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ, ಕರ್ನಾಟಕ ಪ್ರವಾಸಿ ಸೌಧದಲ್ಲಿ ದಾನಿಗಳಿಗೆ ವಾಸ್ತವ್ಯಕ್ಕಾಗಿ ನೀಡುತ್ತಿದ್ದ ವಾರ್ಷಿಕ 60 ದಿವಸಗಳನ್ನು 20 ದಿನಗಳ ಅವಧಿಗೆ ಸೀಮಿತಗೊಳಿಸಿ 10 ವರ್ಷದವರೆಗೆ ನೀಡಲು ಸರ್ಕಾರ ಆದೇಶ ಹೊರಡಿಸಿದ್ದು, ಪ್ರಸ್ತುತ 40 ಕೊಠಡಿಗಳು ಭಕ್ತರಿಗೆ ಆನ್‌ಲೈನ್ ಮೂಲಕ ದೊರಕುತ್ತಿವೆ. ದಾನಿಗಳಿಗೆ ಕೊಠಡಿಯ ದರದ ಶೇ.25 ರಷ್ಟನ್ನು ಪಾವತಿಸುವಂತೆ ಸೂಚಿಸಲಾಗಿದೆ.

ಕೆ.ಎ. ತಿಪ್ಪೇಸ್ವಾಮಿ ಮತ್ತು ಪ್ರಾಣೇಶ್ ರವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಸತೀಶ್ ಜಾರಕಿಹೊಳಿ, ಮಾನವ–ವನ್ಯಪ್ರಾಣಿ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರ ಸೌರಶಕ್ತಿ ಬೇಲಿ ನಿರ್ಮಾಣ, ಆನೆ ತಡೆ ಕಂದಕ ನಿರ್ಮಾಣ, ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಕೆರೆಗಳ ನಿರ್ಮಾಣ, ಕಾಡಾನೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಆನೆಗಳಿಗೆ ರೇಡಿಯೋ ಕಾಲರ್ ಅಳವಡಿಸಿ ಅವುಗಳ ಚಲನವಲನ ಕುರಿತು ನಿಗಾ ವಹಿಸಲಾಗುತ್ತಿದೆ ಮತ್ತು ರೈತರಿಗೆ ಸೋಲಾರ್ ಬೇಲಿ ನಿರ್ಮಾಣಕ್ಕೆ ಶೇ. 50 ರಷ್ಟು ಧನಸಹಾಯವನ್ನು ಇಲಾಖೆ ವತಿಯಿಂದ ನೀಡಲಾಗುತ್ತಿದೆ. ಜೊತೆಗೆ ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ರೂ 5 ಲಕ್ಷ ಪರಿಹಾರ ಧನ ನೀಡಲಾಗುತ್ತಿದೆ ಎಂದರು.

ಕೆ.ಎ. ಶರವಣ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವ ಆರ್. ವಿ. ದೇಶಪಾಂಡೆ, ಪ್ರಸ್ತುತ ರಾಜ್ಯದಲ್ಲಿ ನೀರಿನ ಸಮಸ್ಯೆ 327 ಗ್ರಾಮಗಳಿಗೆ 595 ಟ್ಯಾಂಕರ್‌ಗಳ ಮೂಲಕ ಮತ್ತು 420 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲಾಗುತ್ತಿದೆ. ರಾಜ್ಯದಲ್ಲಿ 78.90 ಲಕ್ಷ ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಬರಪೀಡಿತ ತಾಲ್ಲೂಕುಗಳಲ್ಲಿನ ಜಾನುವಾರುಗಳಿಗೆ ಮುಂದಿನ 17 ವಾರಗಳಿಗೆ ಸಾಕಾಗುತ್ತದೆ ಎಂದ ಅವರು, ಕಂದಾಯ ಇಲಾಖೆಯಿಂದ ಎಸ್.ಡಿ.ಆರ್.ಎಫ್. ಅಡಿಯಲ್ಲಿ ಬರ, ಪ್ರವಾಹ ಮತ್ತು ಇತರೆ ಪ್ರಕೃತಿ ವಿಕೋಪ ಪರಿಹಾರ ಕಾರ್ಯಗಳಿಗೆ 351 ಕೋಟಿಗಳನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದೆ. ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಬರಪೀಡಿತ ತಾಲ್ಲೂಕುಗಳಲ್ಲಿನ ಕುಡಿಯುವ ನೀರಿನ ಕಾರ್ಯಗಳಿಗೆ 131 ಕೋಟಿ ರೂ. ಮಂಜೂರಾತಿ ದೊರೆತ್ತಿದ್ದು, 40.50 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ನಗರಾಭಿವೃದ್ಧಿ ಇಲಾಖೆಯಿಂದ ಕುಡಿಯುವ ನೀರಿಗಾಗಿ 50 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುಂಜಾಗ್ರತಾ ಕ್ರಮವಾಗಿ 30 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಕೇಂದ್ರ ಸರ್ಕಾರ ಮುಂಗಾರು ಬರ ಪರಿಹಾರಕ್ಕಾಗಿ 949.49 ಕೋಟಿ ಮಂಜೂರು

ಮಾಡಿದ್ದು, ಅನುದಾನ ಬಿಡುಗಡೆಯಾಗಬೇಕಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಅವಶ್ಯವಿರುವ ಕಡೆ ಉದ್ಯಗೋಗದ ದಿವಸವನ್ನು 100 ರಿಂದ 150 ದಿವಸಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಎಸ್.ವಿ. ಸಂಕನೂರ ಮತ್ತು ತೇಜಸ್ವಿನಿ ಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕ್ರೀಡಾ ಸಚಿವರು, ಕ್ರೀಡಾಪಟುಗಳಿಗೆ ಉತ್ತಮ ತರಬೇತಿ ನೀಡುವ ಸಲುವಾಗಿ ರಾಜ್ಯ 15 ಸ್ಥಳಗಳಲ್ಲಿ ಸಿಂಥೆಟಿಕ್ ಅಥ್ಲೆಟಿಕ್ಸ್ ಟ್ರಾಕ್, 3 ಸ್ಥಳಗಳಲ್ಲಿ ಸಿಂಥೆಟಿಕ್ ಹಾಕಿ ಟರ್ಫ್ ಮತ್ತು ಬಳ್ಳಾರಿಯಲ್ಲಿ ಸಿಂಥೆಟಿಕ್ ಪುಟ್‌ಬಾಲ್ ಟರ್ಫ್ ಅಳವಡಿಸಿದ್ದು, ದೇಶದಲ್ಲೇ ಹೆಚ್ಚು ಸಂಖ್ಯೆಯ ಸಿಂಥೆಟಿಕ್ ಟರ್ಫ್ ಹೊಂದಿರುವ ರಾಜ್ಯ ನಮ್ಮದಾಗಿರುತ್ತದೆ. ರಾಜ್ಯದಲ್ಲಿ ಒಟ್ಟು 34 ಕ್ರೀಡಾ ವಸತಿ ಶಾಲೆಗಳಿದ್ದು, ಉತ್ತಮ ತರಬೇತಿ ನೀಡುವ ಸಲುವಾಗಿ ಒಟ್ಟು 136 ತರಬೇತುದಾರರು ಮತ್ತು 16 ಜನ ಕ್ರೀಡಾ ವಿಜ್ಞಾನ ಪರಿಣಿತರ ಸೇವೆ ಒದಗಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಕ್ರೀಡಾ ಸಾಧಕರನ್ನು ಪ್ರೋತ್ಸಾಹಿಸುವ ಸಲುವಾಗಿ ವಿದ್ಯಾರ್ಥಿ ವೇತನ, ಶೈಕ್ಷಣಿಕ ಶುಲ್ಕ ಮರುಪಾವತಿ, ನಗದು ಪುರಸ್ಕಾರ ಮತ್ತು ಸಹಾಯಧನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸಾಧಕ ಕ್ರೀಡಾಪಟುಗಳಿಗೆ "ಏಕಲವ್ಯ ಪ್ರಶಸ್ತಿ" , ಗ್ರಾಮೀಣ ಕ್ರೀಡಾ ಸಾಧಕರಿಗೆ "ಕರ್ನಾಟಕ ಕ್ರೀಡಾರತ್ನ" ಪ್ರಶಸ್ತಿಗಳು ನೀಡಿ ಗೌರವಿಸಲಾಗುತ್ತಿದೆ ಎಂದರು.